ಸೇವೆ ಯಿಂದ ಇವರನ್ನು ಅಮಾನತ್ತುಗೊಳಿಸಲಾಗಿದೆ. ಮತ್ತು ಅವ್ಯವಹಾರವು ಬೆಂಗಳೂರು ನಗರ ಹಾಗೂ ಬೆಂಗಳೂರು ಗ್ರಾಮಾಂತರ, ಕೋಲಾರ, ತುಮಕೂರು, ಹಾಸನ, ಶಿವಮೊಗ್ಗ, ಕೊಡಗು, ದಕ್ಷಿಣ ಕನ್ನಡ ಮತ್ತು ಬೆಳಗಾಂ ಜಿಲ್ಲೆಗಳಲ್ಲಿ.

ರಾಜ್ಯದಲ್ಲಿ ಕೃಷಿ ತೋಟಗಾರಿಕೆಯ ಜಮೀನಿನ ಸಕ್ರಮ

1658 - ಶ್ರೀ ವಿಶ್ವೇಶ್ವರ ಹೆಗಡೆ (ಅಂಕೋಲ) : ಮಾನ್ಯ ತೋಟಗಾರಿಕೆ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಕೃಷಿ ತೋಟಗಾರಿಕೆಗೆ ಬಿಟ್ಟಿರುವ ಜಮೀನಿನ ಪ್ರಕರಣ ಯಾವ ಯಾವ ಜಿಲ್ಲೆಯಲ್ಲಿ ಇದೆ. (ಮಾಹಿತಿ ನೀಡುವುದು)

ಆ) ಉತ್ತರ ಕನ್ನಡ ಜಿಲ್ಲೆಯಲ್ಲಿ ತೋಟಕ್ಕೆ ಬಿಟ್ಟಿರುವ ಬೆಟ್ಟ ಸಕ್ರಮಗೊಳಿಸಲು ಸರ್ಕಾರವು ಯಾವ ಕ್ರಮ ತೆಗೆದುಕೊಳ್ಳುತ್ತಿದೆ.

ಇ) ಇನ್ನು ಎಷ್ಟು ದಿವಸಗಳಲ್ಲಿ ಸರ್ಕಾರವು ಸಕ್ರಮಗೊಳಿಸಲು ಕ್ರಮ ತೆಗೆದುಕೊಳ್ಳುತ್ತದೆ.

ಶ್ರೀ ಡಿ.ಟಿ. ಜಯಕುಮಾರ್ (ತೋಟಗಾರಿಕೆ ರಾಜ್ಯ ಸಚಿವರು) :

ಅ) ಕರ್ನಾಟಕ ರಾಜ್ಯದಲ್ಲಿ ತೋಟಗಾರಿಕೆಗೆ ಒಳಪಟ್ಟಿರುವ ಜಮೀನಿನ ವಿಸ್ತೀರ್ಣವು ಒಟ್ಟು 13.47 ಲಕ್ಷ ಹೆಕ್ಟೇರಗಳಷ್ಟಿದೆ ಆದರೆ ಜಮೀನಿನ ಪ್ರಕರಣ ಯಾವ ಯಾವ ಜಿಲ್ಲೆಯಲ್ಲಿ ಇದೆ ಎಂಬ ಬಗ್ಗೆ ಮಾಹಿತಿ ಈ ಇಲಾಖೆಯಲ್ಲಿ ಇರುವುದಿಲ್ಲ.

ಆ) ತೋಪಿನ ಬೆಟ್ಟ ಹಾಗೂ ಇತರೇ ವಿಶೇಷ ಹಕ್ಕುಳ್ಳ ಜಮೀನುಗಳನ್ನು ಸಕ್ರಮ ಗೊಳಿಸುವ ವಿಷಯವು ಸರ್ಕಾರದ ಪರಿಶೀಲನೆಯಲ್ಲಿರುತ್ತದೆ.

ಇ) ಸರ್ಕಾರ ಅಂತಿಮ ತೀರ್ಮಾನ ತೆಗೆದುಕೊಂಡ ನಂತರ ಕ್ರಮ ಕೈಗೊಳ್ಳಲಾಗುವುದು.

ದ.ಕನ್ನಡ ಜಿಲ್ಲೆಯಲ್ಲಿ ಅತೀವೃಷ್ಟಿ ಹಾಗೂ ಪ್ರಾಕೃತಿಕ ವೈಪರೀತ್ಯಕ್ಕೆ ಒಳಗಾದವರಿಗೆ ಪರಿಹಾರ

1659 - ಶ್ರೀ ಎಸ್. ಯೋಗೀಶ್ ಭಟ್ (ಮಂಗಳೂರು) : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ 1997ರ ಮಳೆಗಾಲದಲ್ಲಿ ಅತಿವೃಷ್ಟಿಯಿಂದ ಹಾಗೂ ಪ್ರಾಕೃತಿಕ ವೈಪರೀತ್ಯದಿಂದ ಆಗಿರುವಂತಹ ಹಾನಿ ಎಷ್ಟು?

ಆ) ಈ ಸಮಸ್ಯೆ ಬಗೆಹರಿಸಲು ಸರ್ಕಾರವು ಕೈಗೊಂಡ ಕ್ರಮ ಏನು? ಹಾಗೂ ಎಷ್ಟು ಪರಿಹಾರ ಧನ ಕೊಡಲಾಗುವುದು?